ವಿಷಯ : ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸುವಲ್ಲಿ ವಿಳಂಬ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 433 (731)

ಶ್ರೀ ಮಲ್ಲಾರಗೌಡ ಎಸ್. ಪಾಟೀಲ್ (ಸಂಕೇಶ್ವರ) :– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಕೃಷಿ ಮಾರಾಟ ಇಲಾಖೆಯಲ್ಲಿ ಇರುವ ನೌಕರರ ಸಂಖ್ಯೆ ಎಷ್ಟು ?

ಆ) ಈ ನೌಕರರ ಹಾಗೂ ಸರ್ಕಾರದ ಯೋಗ್ಯ ಆಡಳಿತಕ್ಕಾಗಿ ವ್ಯಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸುವಲ್ಲಿ ವಿಳಂಬವಾಗಲು ಕಾರಣವೇನು ?

ಶ್ರೀ ಕೆ. ಹೆಚ್. ಪಾಟೀಲ್ (ಸಹಕಾರ ಸಚಿವರು) :–

ಅ) 1) ಕೃಷಿ ಮಾರುಕಟ್ಟೆ ಇಲಾಖೆಯ ಸೇವೆಯ ನೌಕರರ ಸಂಖ್ಯೆ 1028.

2) ಮಾರುಕಟ್ಟೆ ಸಮಿತಿ ಸೇವೆಯ ನೌಕರರ ಸಂಖ್ಯೆ 1830.

ಆ) ಕರಡು ವ್ಯಂದ ಮತ್ತು ನೇಮಕಾತಿ ನಿಯಮಗಳನ್ನು ಈಗಾಗಲೇ ನಿಯಮಾನುಸಾರ ಪರಿಶೀಲನೆ ಮಾಡಲಾಗಿದೆ. ಅದನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸಾಮಾನ್ಯ ನಿರ್ದೇಶನಗಳ ಪ್ರಕಾರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಗೆ ಪರಿಶೀಲನೆಗೋಸ್ಕರ ಕಳುಹಿಸಲಾಗಿದೆ. ಅದು ಬಂದ ನಂತರ ವಿಳಂಬವಿಲ್ಲದೇ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ವಿಷಯ :– ಸಾಲಗಾಮೆ ಗ್ರಾಮದ ಹಾಲಿನ ಡೈರಿಯ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 435 (712)

ಶ್ರೀ ಬಿ. ಶಿವರಾಮು (ಗಂಡಸಿ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಾಸನ ತಾಲ್ಲೂಕು ಸಾಲಗಾಮೆ ಗ್ರಾಮದಲ್ಲಿರುವ ಹಾಲಿನ ಡೈರಿಯಲ್ಲಿ 5 ವರ್ಷಗಳಿಂದ ಲೆಕ್ಕಪತ್ರಗಳ ಪರೀಕ್ಷೆ ನಡೆಯದೇ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮ ಏನು ?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶುಸಂಗೋಪನಾ ಸಚಿವರು) :–

ಅ) ಹೌದು.

ಆ) ಈ ಬಗ್ಗೆ ಸಂಬಂಧಿಸಿದವರ ಮೇಲೆ ಸೂಕ್ತ ಕ್ರಮ ಕೈಗೊಂಡು ಸಂಘದ ಲೆಕ್ಕ ಪರಿಶೋಧನೆಯನ್ನು ಮಾಡಿಸಬೇಕೆಂದು ಸಹಕಾರ ಲೆಕ್ಕ ಪರಿಶೋಧನಾ ಇಲಾಖೆಯ ಸಹಾಯಕ ನಿರ್ದೇಶಕರು ಮತ್ತು ಉಪ ನಿರ್ದೇಶಕರಿಗೆ ಸೂಚಿಸಲಾಗಿದೆ.

ವಿಷಯ :– ಕೃಷಿ ಸಾಮಗ್ರಿಗಳ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 436 (713) :–

ಶ್ರೀ ಬಿ. ಶಿವರಾಮ್ (ಗಂಡಸಿ) :– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೃಷಿ ಸಾಮಗ್ರಿ ಮತ್ತು ದಾಸ್ತಾನುಗಳ ಸಾಗಾಣಿಕೆಗಾಗಿ ಪಲ್ಲಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು (ಪಿ.ಪಿ.ಪಿ.ಸಿ. ಯೋಜನೆ) ಮಂಜೂರಾಗಿರುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ?

ಆ) ಹಾಗಿದ್ದಲ್ಲಿ ಹಣ ಒದಗಿಸಿ ಸದರಿ ಪ್ರಸ್ತಾವನೆಯನ್ನು ಕೈಗತ್ತಿಕೊಳ್ಳಲು ತೀಪ್ರ ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಕೆ. ಹೆಚ್. ಪಾಟೀಲ್ (ಸಹಕಾರ ಸಚಿವರು) :–

ಅ) ಹೌದು.

ಆ) ಪರಿಶೀಲನೆಯಲ್ಲಿದೆ.